ಕರ್ನಾಟಕ ಸರ್ಕಾರ

## ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, (ಇತರೆ ಪರೀಕ್ಷೆಗಳು) ಮಲ್ಲೇಶ್ವರಂ, ಬೆಂಗಳೂರು-03

E-Mail:adpisvsection@gmail.com, ಕಛೇರಿ ದೂರವಾಣಿ:080-23360109

ಸಂಖ್ಯೆ: ವಿ1/ವಿಸಪ/ಅ.ಸೂ/16 /2021 ದಿನಾಂಕ: 28/10/2021

**ತಿದ್ದುಪಡಿ ಸುತ್ತೋಲೆ**

**ವಿಷಯ:** 2021ರಲ್ಲಿ ನಡೆಯಲಿರುವ ವಿಶೇಷ ಸಂಗೀತ, ನೃತ್ಯ ಮತ್ತು ತಾಳವಾದ್ಯ ವಿಷಯಗಳ ಜೂನಿಯರ್ ಪರೀಕ್ಷೆಗೆ ಅರ್ಜಿ ಸಲ್ಲಿಸಲು ವಯೋಮಿತಿ ನಿಗಧಿ ಕುರಿತು.

**ಉಲ್ಲೇಖ:** ಈ ಕಛೇರಿ ಅಧಿಸೂಚನೆ ಸಮಸಂಖ್ಯೆ:ದಿನಾಂಕ:18/10/2021.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021ರಲ್ಲಿ ನಡೆಯಲಿರುವ ವಿಶೇಷ ಸಂಗೀತ, ನೃತ್ಯ ಮತ್ತು ತಾಳವಾದ್ಯ ವಿಷಯಗಳ ಪರೀಕ್ಷೆಗಳಿಗೆ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಈ ಕಛೇರಿಯಿಂದ ದಿನಾಂಕ 18/10/2021 ರಂದು ಅಧಿಸೂಚನೆ ಹೊರಡಿಸಲಾಗಿದೆ. ಸದರಿ ಅಧಿಸೂಚನೆಯಲ್ಲಿ ವಿಶೇಷ ಸಂಗೀತ, ನೃತ್ಯ ಮತ್ತು ತಾಳವಾದ್ಯ ವಿಷಯಗಳ ಜೂನಿಯರ್ ಪರೀಕ್ಷೆಗಳಿಗೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ದಿನಾಂಕ:01/03/2021 ಕ್ಕೆ 10 ವರ್ಷಗಳು ಪೂರ್ಣಗೊಳಿಸಿರಬೇಕೆಂದು ತಿಳಿಸಲಾಗಿರುತ್ತದೆ. ಅಭ್ಯರ್ಥಿಗಳ ಹಿತದೃಷ್ಟಿಯಿಂದ ಈ ಕಛೇರಿ ಅಧಿಸೂಚನೆ ದಿನಾಂಕ:**:18/10/2021ಕ್ಕೆ 10 ವರ್ಷಗಳನ್ನು ಪೂರೈಸಿರುವ ಅಭ್ಯರ್ಥಿಗಳು ವಿಶೇಷ ಸಂಗೀತ/ನೃತ್ಯ ಮತ್ತು ತಾಳವಾದ್ಯ ವಿಷಯಗಳ ಜೂನಿಯರ್ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.** ಇದರ ಸದುಪಯೋಗವನ್ನು ಅಭ್ಯರ್ಥಿಗಳು ಪಡೆದುಕೊಳ್ಳಲು ತಿಳಿಸಿದೆ.

28/10/2021

(ಎಸ್. ಗೀತಾ)
ನಿರ್ದೇಶಕರು
ಇತರೆ ಪರೀಕ್ಷೆಗಳು

**ಇವರಿಗೆ,**

1. ರಾಜ್ಯದ ಎಲ್ಲಾ ಸಂಗೀತ/ನೃತ್ಯ/ತಾಳವಾದ್ಯ ಪರೀಕ್ಷಾ ಕೇಂದ್ರದ ಮುಖ್ಯಸ್ಥರುಗಳಿಗೆ ಸೂಕ್ತ ಕ್ರಮಕ್ಕಾಗಿ.
2. ಹಿರಿಯ ಸಹಾಯಕ ನಿರ್ದೇಶಕರು, ಸಂಗೀತ/ನೃತ್ಯ ವಿಭಾಗ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ವಿಭಾಗೀಯ ಅಧ್ಯಕ್ಷರು, ಬೆಂಗಳೂರು/ಮೈಸೂರು/ಬೆಳಗಾಂ/ಕಲಬುರ್ಗಿ ವಿಭಾಗ ಸಹನಿರ್ದೇಶಕರ ಕಛೇರಿ, ಇವರುಗಳಿಗೆ ಮಾಹಿತಿಗಾಗಿ.
4. ಹಿರಿಯ ಸಹಾಯಕ ನಿರ್ದೇಶಕರು, ಗಣಕಶಾಖೆ ಇವರಿಗೆ ಅಂತರ್‌ಜಾಲದಲ್ಲಿ ಪ್ರಕಟಿಸಲು ಮತ್ತು ಮುಂದಿನ ಕ್ರಮಕ್ಕಾಗಿ.
5. ಕಛೇರಿ ಪ್ರತಿ.

**ಪ್ರತಿಯನ್ನು ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.**

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಆಯುಕ್ತರು ಹಾಗೂ ಅಧ್ಯಕ್ಷರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರಾಂಶುಪಾಲರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಇವರಿಗೆ ಕಳುಹಿಸುತ್ತಾ ಸಂಬಂಧಿಸಿದ ನೋಡಲ್ ಅಧಿಕಾರಿಗಳಿಗೆ ಪರೀಕ್ಷಾ ಕಾರ್ಯದ ಉಸ್ತುವಾರಿ ವಹಿಸಲು ತಿಳಿಸಿದೆ.